**ಸಾಕ್ಷಿಗೆ ದಿನಾಂಕಃ 07.03.2026 ರಂದು ಪ್ರಮಾಣ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ. ಎನ್.ಎಸ್.ಜಿ.ಎಂ. ವಕೀಲರಿಂದಃ**

ಇಂದು ನಾನು ನ್ಯಾಯಾಲಯಕ್ಕೆ ಸಲ್ಲಿಸಿರುವ ಪ್ರತಿಜ್ಞಾ ಹೇಳಿಕೆಯಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿವೆ. ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಆರೋಪಿಯು ಸಾಲದ ಮರುಪಾವತಿಗಾಗಿ ನೀಡಿದ ಚೆಕ್‌ನ್ನು ನಿಪಿ-1 ಎಂದು, ಸಹಿಯನ್ನು ನಿಪಿ-1(ಎ) ಎಂದು, ಬ್ಯಾಂಕಿನವರು ಕೊಟ್ಟ ಹಿಂಬರಹವನ್ನು ನಿಪಿ-2 ಎಂದು, ಆರೋಪಿಗೆ ವಕೀಲರ ಮುಖಾಂತರ ಕೊಟ್ಟ ನೋಟೀಸಿನ ಕಚೇರಿ ಪ್ರತಿಯನ್ನು ನಿಪಿ-3 ಎಂದು, ಪೊಸ್ಟಲ್ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.4 ಎಂದು, ದಿ.02.02.2026 ರಂದು ಪೋಸ್ಟ್ ಮಾಸ್ಟರ್ ರವರಿಗೆ ಬರೆದ ಮನವಿ ಮತ್ತು ಪೋಸ್ಟ್ ಮಾಸ್ಟರ್ ರವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ಒಟ್ಟಾಗಿ ನಿ.ಪಿ.5 ಎಂದು ಗುರುತಿಸಲಾಯಿತು. ಆದ್ದರಿಂದ ಆರೋಪಿಯ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.

**(ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಒ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು**
**ಜೆ.ಎಂ.ಎಫ್.ಸಿ., ಟಿ.ನರಸೀಪುರ.**